

ಅರುಣ ಪಿ. ಭಟ್ಟ

## ವಾರದ ಭವಿಷ್ಯ 12.3.2020ರಿಂದ 18.3.2020ರ ವರೆಗೆ




ವಿವೇಚನೆಯಿಂದ ಕಾರ್ಯಗಳಲ್ಲಿ ಪಾಲ್ಗೊಳ್ಳಿ. ಕೆಲವರ ಮಾತನ್ನು ನಂಬಿ ವ್ಯವಹಾರದಲ್ಲಿ ನಷ್ಟವಾಗುವ ಸಾಧ್ಯತೆ ಇದೆ. ಸಹೋದರ ವಿಶ್ವಾಸಗಳನ್ನು ಪಡೆಯಲು ಪ್ರಯತ್ನಿಸುವುದು ಸೂಕ್ತ. ನಿಮ್ಮ ವ್ಯಾಜ್ಯಗಳಿಗೆ ಸೂಕ್ತ ಪರಿಹಾರಗಳು ದೊರಕಲಿದೆ.

ಶುಭದಿನ 20. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.




ನಿರುದ್ಯೋಗಿಗಳಿಗೆ ಉದ್ಯೋಗ ಅವಕಾಶ. ಬ್ಯಾಂಕಿಂಗ್ ವ್ಯವಹಾರಗಳು ಯೋಜಿತವಾಗಿ ನಡೆಯಲಿದೆ. ಕಷ್ಟದ ಕಾರ್ಯಗಳನ್ನು ಸಹ ಅನಾಯಾಸವಾಗಿ ಮಾಡಿ ಮುಗಿಸಲಿದ್ದೀರಿ. ಕುಟುಂಬದಲ್ಲಿ ಶುಭಸುದ್ದಿ ಬರಲಿದೆ.

ಶುಭದಿನ 19. ಹನುಮಾನ್ ಚಾಲಿಸ್ ಪಠಿಸಿರಿ.




ಆತ್ಮೀಯ ವ್ಯಕ್ತಿಗಳೊಡನೆ ವಿವಾದಗಳು ಹೆಚ್ಚಾಗಬಹುದು. ಭೂಮಿಗೆ ಸಂಬಂಧಪಟ್ಟಂತಹ ವ್ಯಾಜ್ಯಗಳಿಂದ ನಿಮ್ಮ ಮನಸ್ಥಿತಿ ಹಾಳಾಗಬಹುದು. ಅನಗತ್ಯವಾಗಿ ಮಾತಿನಲ್ಲಿ ಏನಾದರೂ ಹೇಳಿ ಸಿಲುಕಬೇಡಿ. ಕೆಲಸದಲ್ಲಿ ಸಮಸ್ಯೆಗಳು ಉದ್ಭವವಾಗಲಿದೆ.

ಶುಭದಿನ 22. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ಯೋಜಿತ ಕಾರ್ಯಗಳಲ್ಲಿ ವ್ಯವಸ್ಥಿತ ಕಾರ್ಯ ಮಾಡುವಿರಿ. ಧನಾಗಮನ ವ್ಯವಸ್ಥೆ ಸರಾಗವಾಗಿ ನಡೆಯಲಿದೆ. ಪ್ರೇಕ್ಷಣೀಯ ಸ್ಥಳ ಭೇಟಿ ಮಾಡುವ ಸಾಧ್ಯತೆ ಇದೆ. ಆತ್ಮೀಯರೊಡನೆ ಮನಸ್ತಾಪ ಆಗದಂತೆ ನೋಡಿಕೊಳ್ಳುವುದು ಒಳ್ಳೆಯದು.

ಶುಭದಿನ 20. ಶಿವಕವಚ ಪಠಣ ಮಾಡಿರಿ.




ಜನಪ್ರಿಯತೆ ಹೆಚ್ಚಾದಂತೆ ವಿರೋಧಿಗಳೂ ಹೆಚ್ಚಾಗಲಿದ್ದಾರೆ. ನಿಮ್ಮ ಪ್ರತಿ ಕಾರ್ಯಗಳಿಗೆ ತೊಂದರೆ ನೀಡುವವರನ್ನು ದೂರವಿಡಿ. ವೈಯಕ್ತಿಕ ವಿಚಾರಗಳನ್ನು ಯಾರೊಂದಿಗೂ ಹಂಚಿಕೊಳ್ಳಬೇಡಿ. ನಿಮ್ಮ ಆಲೋಚನೆ ಕ್ಷುಲ್ಲಕ ವಿಚಾರಗಳತ್ತ ಹರಿಸಬೇಡಿ.

ಶುಭದಿನ 21. ಲಿಂಗಾಷ್ಟಕ ಪಠಿಸಿರಿ.




ಬಹುಮುಖ್ಯ ಕೆಲಸವನ್ನು ನೀವು ಮರೆತುಬಿಡಬಹುದು. ಆರೋಗ್ಯದ ಹಿತದೃಷ್ಟಿಯನ್ನು ಮನಗಾಣಿರಿ. ಹೆಚ್ಚಿನ ಕೆಲಸ ಹಾಗೂ ಹೊಸ ಆದಾಯ ಮಾರ್ಗ ಕಂಡುಬರಲಿದೆ. ಹೊಸ ಉದ್ಯೋಗ ಭರವಸೆಯ ಮಹಾಪೂರವನ್ನೇ ತರಲಿದೆ.

ಶುಭದಿನ 23. ಚಂಡಿ ಪಾರಾಯಣ ಮಾಡಿರಿ.




ವ್ಯವಹಾರದ ನಿಮಿತ್ತ ತಿರುಗಾಟ ಹೆಚ್ಚಾಗಬಹುದು. ಸಾಲದ ಬಾಧೆ ನಿಮ್ಮ ಸಮಸ್ಯೆಗಳಿಗೆ ಮತ್ತಷ್ಟು ಸಂಕಷ್ಟ ತಂದೊಡ್ಡಲಿದೆ. ವ್ಯವಹಾರದಲ್ಲಿ ಅಲಕ್ಷತನ ಹೆಚ್ಚಾಗಬಹುದು. ಕಟ್ಟಡ ಕಾಮಗಾರಿಗಳಲ್ಲಿ ಹಣಕಾಸಿನ ಕುಂದುಕೊರತೆ ಕಾಡಲಿದೆ.

ಶುಭದಿನ 22. ಸೌಂದರ್ಯ ಲಹರಿ ಪಠಿಸಿರಿ.




ಚರ್ಚಾಕೂಟಗಳಲ್ಲಿ ಪಾಲ್ಗೊಳ್ಳಲಿದ್ದೀರಿ. ನಿಮ್ಮ ನಿರೀಕ್ಷೆಯಂತೆ ಪ್ರಬಲರಾಗುವ ಸಾಧ್ಯತೆ ಕಂಡುಬರುತ್ತದೆ. ವಿದ್ಯಾರ್ಥಿಗಳಿಗೆ ಉತ್ತಮ ನಿರೀಕ್ಷೆಗಳು ಮೂಡಲಿದೆ. ಸ್ವಾವಲಂಬನೆಯ ಚಿಂತನೆ ಮೂರ್ತಸ್ವರೂಪ ಪಡೆಯಲಿದೆ. ಪ್ರಮಾಣ ಹೆಚ್ಚಾಗಬಹುದು.

ಶುಭದಿನ 20. ವೆಂಕಟೇಶ್ವರ ಸ್ತೋತ್ರ ಪಠಿಸಿರಿ.




ಕುಟುಂಬದಲ್ಲಿ ಅಶಾಂತಿಯ ವಾತಾವರಣ ಗೋಚರವಾಗಲಿದೆ. ಕೆಲವು ವ್ಯಕ್ತಿಗಳಿಂದ ನಿಮ್ಮ ಕಾರ್ಯಗಳಲ್ಲಿ ಹಸ್ತಕ್ಷೇಪ ಕಂಡುಬರುತ್ತದೆ. ವ್ಯಾವಹಾರಿಕ ಕ್ಷೇತ್ರದಲ್ಲಿ ಹಿನ್ನಡೆ ಆಗಬಹುದು. ಆರೋಗ್ಯದಲ್ಲಿ ವ್ಯತ್ಯಾಸ ಕಾಣಬಹುದು.

ಶುಭದಿನ 21. ಕಾಲಭೈರವನ ಸೇವೆ ಮಾಡಿರಿ.




ಉದ್ಯೋಗದಲ್ಲಿ ಉತ್ತಮ ಸ್ಥಾನಮಾನ ಸಿಗಲಿದೆ. ಸಹವರ್ತಿಗಳು ನಿಮ್ಮ ಯೋಜನೆಗಳಿಗೆ ಬೆಂಬಲ ನೀಡಲಿದ್ದಾರೆ. ಅದೃಷ್ಟ ಒದಗಿಬರಲಿದೆ. ದಾಂಪತ್ಯದಲ್ಲಿ ಪ್ರೀತಿಯ ಮನಸ್ಥಿತಿಯಿಂದ ಇರಲಿದ್ದೀರಿ. ಉದ್ಯೋಗಸ್ಥರಿಗೆ ಮಧ್ಯ ಭಾಗದಲ್ಲಿ ಬಡ್ತಿ ಸಂಭವ.

ಶುಭದಿನ 21. ವಿಷ್ಣು ಸಹಸ್ರನಾಮ ಮಾಡಿ.




ಅಪರಿಚಿತರಿಂದ ನಿಮ್ಮ ಯೋಜನೆಗಳಲ್ಲಿ ನಷ್ಟವಾಗಬಹುದು. ನಂಬಿಕೆದ್ರೋಹದಂತಹ ಚಟುವಟಿಕೆಗಳು ನಡೆಯಲಿದ್ದು ಎಚ್ಚರದಿಂದಿರಿ. ವಾಹನದಲ್ಲಿ ಜಾಗ್ರತೆ ವಹಿಸುವುದು ಸೂಕ್ತ. ಸಂಗಾತಿಯೊಡನೆ ಕಲಹಗಳಲ್ಲಿ ಪಾಲ್ಗೊಳ್ಳಬೇಡಿ.

ಶುಭದಿನ 23. ಗಣೇಶಪಂಚರತ್ನ ಸ್ತೋತ್ರ ಪಠಿಸಿರಿ.




ಕೆಲಸಕಾರ್ಯಗಳಲ್ಲಿ ನಿಮ್ಮ ಪಾಲ್ಗೊಳ್ಳುವಿಕೆ ಉತ್ತಮವಾಗಲಿದೆ. ಕಲಿಕೆಯ ವಿಷಯಾಸಕ್ತಿ ತುಂಬಾ ಉತ್ತಮ ಮಟ್ಟದಲ್ಲಿ ಇರಲಿದೆ. ಸ್ನೇಹಿತರ ಜೊತೆಗೆ ಉತ್ತಮ ಬಾಂಧವ್ಯವನ್ನು ಬೆಳೆಸಿಕೊಳ್ಳಲು ಮುಂದಾಗಿ. ಆರ್ಥಿಕ ಸ್ಥಿತಿ ಮಧ್ಯಮ ಗತಿಯಲ್ಲಿ ನಡೆಯಲಿದೆ.

ಶುಭದಿನ 22. ಲಕ್ಷ್ಮೀ ನರಸಿಂಹ ಸ್ತೋತ್ರ ಪಠಿಸಿರಿ.

DHEEPAM
LAMP OIL
BLEND OF 5 OILS
ದೀಪದ ಬೆಳಕಲ್ಲಿ
ಒಂದು ದೈವೀಕ
ಅನುಭವ
ಸುಗಂಧ ಸುವಾಸನೆ
ಹರಡುವ ಪಂಚ ದೀಪ ಎಣ್ಣೆ

